Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 23.08.2021

**ದಿನಾಂಕ: 23.08.2021 ರಂದು ನಡೆದ ವಾರ್ಡ್ ನಂ.08 ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಶ್ರೀನಿವಾಸಮೂರ್ತಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (BWSSB)
- ಶ್ರೀಮತಿ ಕವಿತ, ಕಿರಿಯ ಆರೋಗ್ಯ ಪರೀವಿಕ್ಷಕರು, ಆರೋಗ್ಯ

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಕಾರ್ಯದರ್ಶಿ, ವಸತಿ ಕ್ಷೇಮಾಭಿವೃದ್ಧಿ ಸಂಘ
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ರಾಜು, ಭದ್ರಪ್ಪ ಬಡಾವಣೆ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

1. ಘನತ್ಯಾಜ್ಯ ನಿರ್ವಹಣೆ:
   1. ವಾರ್ಡ್ ವ್ಯಾಪ್ತಿಯ ರಸ್ತೆಯ ಬದಿಗಳಲ್ಲಿ ಘನತ್ಯಾಜ್ಯ ನಿರ್ವಹಣೆಗೆ Transfer point ಅಗತ್ಯವಿರುತ್ತದೆ. ಇದಕ್ಕಾಗಿ ಕೊಡಿಗೇಹಳ್ಳಿ ಮುಖ್ಯರಸ್ತೆಯಲ್ಲಿರುವ ಪಾರ್ಕ್ ಜಾಗದಲ್ಲಿ 40 * 70 ಅಡಿ ವಿಸ್ತೀರ್ಣದ ಜಾಗವನ್ನು ಉಪಯೋಗಿಸಬಹುದಾಗಿ ವಾರ್ಡ್ ಸಮಿತಿಯ ಸದಸ್ಯರು ಪ್ರಸ್ತಾವನೆ ಸಲ್ಲಿಸಿದ್ದಾರೆ. ಇದರಿಂದ ಘನತ್ಯಾಜ್ಯ ನಿರ್ವಹಣೆಗೆ ಸುಲಭವಾಗುತ್ತದೆ ಎಂದು ಸಭೆಗೆ ತಿಳಿಸಿದರು.
   2. ಸಹಕಾರನಗರದ ಗಣೇಶ ದೇವಸ್ಥಾನದ ಬದಿಯಲ್ಲಿರುವ ಕಸದ ಬುಟ್ಟಿಯ ಸುತ್ತಾಮುತ್ತಲಿನ ಪ್ರದೇಶದಲ್ಲಿ ದುರ್ವಾಸನೆಯಿಂದ ದೇವಸ್ಥಾನಕ್ಕೆ ಹೋಗುವ ಭಕ್ತಾದಿಗಳಿಗೆ ತೊಂದರೆ ಉಂಟಾಗುತ್ತಿದೆ ಎಂದು ಸಭೆಗೆ ತಿಳಿಸಿದರು.
   3. ಟಾಟಾನಗರದ ಮುಖ್ಯರಸ್ತೆಯಲ್ಲಿ ಬ್ಲಾಕ್‌ಸ್ಪಾಟ್ ತೆರವುಗೊಳಿಸಲು ಕ್ರಮ ತೆಗೆದುಕೊಳ್ಳುವಂತೆ ಸಭೆಗೆ ತಿಳಿಸಿದರು.

2. ಆರೋಗ್ಯ ಇಲಾಖೆ:
   1. ಕೋವಿಡ್ 3ನೇ ಅಲೆ ಹರಡುವ ಸಾಧ್ಯತೆಯಿದ್ದು, ಕೋವಿಡ್ ಸೋಂಕಿನ ಬಗ್ಗೆ ಎಚ್ಚರವಹಿಸಲು ಅಧಿಕಾರಿಗಳು ಸಮಿತಿ ಸದಸ್ಯರಿಗೆ ಮನದಟ್ಟು ಮಾಡಿರುತ್ತಾರೆ.
   2. ವಸತಿ ಸಮುಚ್ಚಯಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪರಿಶೀಲಿಸಲು ನಿಯಮಿತ ತಪಾಸಣೆಯನ್ನು ಕೈಗೊಳ್ಳುವುದು.
   3. ಅಂಗಡಿಗಳ ಮಾಲೀಕರು ವ್ಯಾಪಾರ ಪರವಾನಿಗೆಯನ್ನು ಪಡೆಯದೇ ವ್ಯಾಪಾರ ಮಾಡುತ್ತಿರುವುವರ ವಿರುದ್ಧ ಕ್ರಮಕೈಗೊಳ್ಳುವುದು.
   4. ಕೋವಿಡ್‌ನಿಂದ ಮೃತಪಟ್ಟ ಬಿ.ಪಿ.ಎಲ್ ಪಡಿತರ ಚೀಟಿ ಹೊಂದಿದವರ ಕುಟುಂಬಕ್ಕೆ ತಲಾ ರೂ. ಒಂದು ಲಕ್ಷಗಳನ್ನು ಸರ್ಕಾರ ನೀಡುತ್ತಿರುವುದರಿಂದ ವಿವರಗಳನ್ನು ಹಿರಿಯ ಆರೋಗ್ಯ ಪರಿವೀಕ್ಷಕರು ಸಲ್ಲಿಸುವಂತೆ ತಿಳಿಸಿರುತ್ತಾರೆ.

3. ಕಾಮಗಾರಿ ವಿಭಾಗ:
   1. 2021-22 ನೇ ಸಾಲಿನ ಅನುದಾನದಲ್ಲಿ ಕಾಯ್ದಿರಿಸಲಾಗಿರುವ ವಿವಿಧ ಪಿಕೋಡ್ ರಡಿಯಲ್ಲಿ ಪರಿಗಣಿಸಬೇಕಾದ ಕಾಮಗಾರಿಗಳ ಬಗ್ಗೆ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿ ಅನುಮೋದನೆ ಪಡೆಯಬೇಕೆಂದು ಸೂಚಿಸಲಾಗಿರುತ್ತದೆ. ಅದರಂತೆ ಚರ್ಚಿಸಲಾಗಿ ವಾರ್ಡ್ ಸಮಿತಿ ಸದಸ್ಯರು/ ಸಾರ್ವಜನಿಕರು ಈ ಕೆಳಕಂಡ ಕಾಮಗಾರಿಗಳನ್ನು ನಿರ್ವಹಿಸಿಕೊಡಬೇಕೆಂದು ಮನವಿ ಮಾಡಿರುತ್ತಾರೆ.
   2. ವಾರ್ಡ್‌ನಲ್ಲಿ ಕೆಲವು ಕಡೆ ಜರೂರಾಗಿ ಕಲವರ್ಟ್‌ಗಳ ನಿಮಾಣ ಕಾಮಗಾರಿಯನ್ನು ಮಾಡಿಕೊಡಬೇಕೆಂದು ತಿಳಿಸಿರುತ್ತಾರೆ.

3. ಅಶ್ವತಪ್ಪ ಬಡಾವಣೆಯಲ್ಲಿ ರಸ್ತೆ ಮತ್ತು ಚರಂಡಿಯನ್ನು ನಿರ್ಮಿಸಿಕೊಡಬೇಕೆಂದು ತಿಳಿಸಿರುತ್ತಾರೆ.
4. ಬಾಲಾಜಿ ಬಡಾವಣೆ ಮತ್ತು ಸುತ್ತಮುತ್ತಲಿನ ಜಾಗಗಳಲ್ಲಿ ಆರ್.ಸಿ.ಸಿ ರಸ್ತೆ ಮತ್ತು ಆರ್.ಸಿ.ಸಿ ಚರಂಡಿಗಳನ್ನು ನಿರ್ಮಿಸಿಕೊಡಬೇಕೆಂದು ತಿಳಿಸಿರುತ್ತಾರೆ.
5. ವಾರ್ಡ್ ವ್ಯಾಪ್ತಿಯ ಸರ್ಕಾರಿ ಜಾಗಗಳಿಗೆ ಫೇನ್ಸಿಂಗ್ ಹಾಕಿಸಿಕೊಡಬೇಕೆಂದು ತಿಳಿಸಿರುತ್ತಾರೆ.
6. ಕುಡಿಯುವ ನೀರಿನ ಸೌಲಭ್ಯಕ್ಕಾಗಿ ತುರ್ತು ಪರಿಸ್ಥಿತಿಯಲ್ಲಿ ಒಂದು ಬೋರ್‌ವೆಲ್ ಕೊರಸಲು ಅನುದಾನವನ್ನು ಕಾಯ್ದಿರಿಸಬೇಕೆಂದು ತಿಳಿಸಿರುತ್ತಾರೆ.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:
   1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
   2. ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
   3. ದೇವಿನಗರ, ಎಲ್.ಕೆ.ಆರ್ ಬಡಾವಣೆಗಳಲ್ಲಿ ಎಲ್.ಇ.ಡಿ ವಿದ್ಯುತ್ ದೀಪಗಳನ್ನು ಸರಿ ಪಡಿಸಲು ಕ್ರಮವಹಿಸುವುದು.

5. ಜಲಮಂಡಳಿ ವಿಭಾಗ:
   1. ರಸ್ತೆ ಡಾಂಬರೀಕರಣ ಮುಗಿದ ನಂತರ ಸ್ಯಾನಿಟರಿ ಚೇಂಬರ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿಪಡಿಸುವುದು.
   2. ಕೊಡಿಗೇಹಳ್ಳಿ ರಸ್ತೆಯಲ್ಲಿ ನಿರ್ವಹಿಸಿರುವ ಒಳಚರಂಡಿ ಕಾಮಗಾರಿಯ ಇಳಿಜಾರು ಸರಿಯಿಲ್ಲದೆ ಇದ್ದು, ಇದನ್ನು ಕೂಡಲೇ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.
   3. ಬಿಬಿಎಂಪಿಯಿಂದ ಕೊರೆದಿರುವ ಬೋರ್‌ವೇಲ್‌ಗಳನ್ನು ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ವರ್ಗಾವಣೆ ಮಾಡಲು ಕ್ರಮವಹಿಸುವುದು.
   4. ತಮ್ಮ ಇಲಾಖೆ ವತಿಯಿಂದ ರಸ್ತೆ ಅಗೆದರೆ ಅದನ್ನು ನಿಯಾಮಾನುಸಾರ ಸರಿಪಡಿಸುವುದು.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಪಿ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08